ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 26-03-2016

## ಪತ್ರಿಕಾ ಪ್ರಕಟಣೆ

# ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

ಬೆಂಗಳೂರು, ಮಾರ್ಚ್ 26 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 27-03-2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಶ್ರೀ ಹಣಮಂತ ಸಂಕಲೂರ ಮತ್ತು ತಂಡ, ಕಲಬುರಗಿ ಜಿಲ್ಲೆರವರಿಂದ ಜಾನಪದ ಮತ್ತು ಭಾವಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ

"**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಕುಮಾರಿ ಸ್ವಪ್ನ ಮತ್ತು ತಂಡ, ಬೆಂಗಳೂರು ಗ್ರಾಮಾಂತರ ಜಿಲ್ಲೆರವರಿಂದ ರಂಗಗೀತೆ ಮತ್ತು ಭಾವಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3. ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
8. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಪ್ರಣವ್ ಸ್ವರೂಪ್. ಬಿ. ಎನ್. ರವರಿಂದ ವೈಲಿನ್ ವಾದನ ಮತ್ತು ಅಶ್ವಿನ್ ನಾಯರ್ ರವರಿಂದ ಮೃದಂಗಂ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

- ಬೆಳಿಗ್ಗೆ 08.00 ಗಂಟೆಯಿಂದ 09.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ರಂಗಮಡಿಲು ಕಲಾಸಂಸ್ಥೆ, ಬೆಂಗಳೂರುರವರ ವತಿಯಿಂದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 09.00 ಗಂಟೆಯಿಂದ 10.00 ಗಂಟೆಯವರೆಗೆ ವಾಣಿ ಸ್ಕೂಲ್, ಮಾಗಡಿ ರಸ್ತೆ ಬೆಂಗಳೂರು ರವರ ವಿದ್ಯಾರ್ಥಿಗಳಿಂದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಬಾಬು:ಜಿಪಿಆರ್.

## ಸರ್ಕಾರಿ ಲೇಖನ ಸಾಮಾಗ್ರಿ ವಿತರಣೆ : 15 ದಿನ ಸ್ಥಗಿತ

ಬೆಂಗಳೂರು, ಮಾರ್ಚ್ 26 (ಕರ್ನಾಟಕ ವಾರ್ತೆ)

2015–16 ನೇ ಸಾಲಿನ ವಾರ್ಷಿಕ ಸರಕು ಪರಿಶೀಲನೆಯ ಪ್ರಯುಕ್ತ ಬೆಂಗಳೂರು, ಮೈಸೂರು, ಕಲಬುರಗಿ ಹಾಗೂ ಧಾರವಾಡಗಳಲ್ಲಿರುವ ಸರ್ಕಾರಿ ಲೇಖನ ಸಾಮಗ್ರಿ ಉಗ್ರಾಣಗಳಲ್ಲಿ ದಿನಾಂಕ: 1–4–2016 ರಿಂದ 16–4–2016 ರವರೆಗೆ ಎಲ್ಲಾ ಸರ್ಕಾರಿ ಕಚೇರಿಗೆ ಲೇಖನ ಸಾಮಗ್ರಿಗಳ ಮತ್ತು ಕಾಗದದ ನೀಡಿಕೆಯನ್ನು ನಿಲ್ಲಿಸಲಾಗುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್.

## NO ISSUE OF STATIONERY

Bengaluru March 26 (Karnataka Information)

It is hereby notified for the information of all the Government and semi Government Officers that there will be no issue of stationery articles and papers from the Government Stationery depot Bangalore, Mysore, Kalaburgi and Dharwad from 01-04-2016 to 16-04-2016 (Both days inclusive) on account of Annual Stock Varification for the year 2015-2016.

babu:gpr

# ಸಹಾಯವಾಣಿ

ಬೆಂಗಳೂರು, ಮಾರ್ಚ್ 26 (ಕರ್ನಾಟಕ ವಾರ್ತೆ)

ಎಸ್.ಎಸ್.ಎಲ್.ಸಿ. ಪರೀಕ್ಷೆ ವಿದ್ಯಾರ್ಥಿ ಜೀವನದಲ್ಲಿ ನಿರ್ಣಾಯಕ ಹಂತದ ಪರೀಕ್ಷೆಯಾಗಿರುತ್ತದೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಮಕ್ಕಳು ಗಳಿಸಬೇಕೆಂದು ಪೋಷಕರ ಅಭಿಲಾಷೆಯಾಗಿರುತ್ತದೆ. ವಿದ್ಯಾರ್ಥಿಗಳ ಸಾಮರ್ಥ್ಯ, ಬುದ್ದಿಶಕ್ತಿ, ಆಸಕ್ತಿ ಕ್ರಿಯಾಶೀಲತೆ, ಕಠಿಣ ಪರಿಶ್ರಮ ಇವುಗಳನ್ನು ಗಣನೆಗೆ ತೆಗೆದುಕೊಳ್ಳದೆ ಹೆಚ್ಚು ಅಂಕಗಳನ್ನು ಗಳಿಸಿ ಎಂದು ಅವರ ಮೇಲೆ ಒತ್ತಡವನ್ನು ಪೋಷಕರು, ಸಮಾಜ, ಶಿಕ್ಷಕರು ಹಾಕುತ್ತಿರುವುದು ಇತ್ತೀಚಿನ ಸಮಸ್ಯೆಯಾಗಿದೆ. ಇದರಿಂದ ವಿದ್ಯಾರ್ಥಿಗಳು ಅಧ್ಯಯನದ ಕಡೆ ಗಮನಹರಿಸಲಾಗದಿರುವುದು, ಏಕಾಗ್ರತೆಯನ್ನು ಕಳೆದುಕೊಳ್ಳುತ್ತಿರುವುದು ಕಂಡು ಬಂದಿದ್ದು, ಈ ಸಮಸ್ಯೆ ನಿವಾರಣೆಯಾಗದೆ ವಿದ್ಯಾರ್ಥಿ ಪರೀಕ್ಷೆಯನ್ನು ಸಮರ್ಥವಾಗಿ ಬರೆಯಲು ಸಾಧ್ಯವಾಗುವುದಿಲ್ಲ. ಈ ಸಮಸ್ಯೆಗಳ ನಿವಾರಣೆ ಮಾಡಿ, ಪರೀಕ್ಷೆಯನ್ನು ಸಮರ್ಥವಾಗಿ ಬರೆಯಲು ಸ್ಪೂರ್ತಿ ನೀಡಬೇಕಾದ ಅವಶ್ಯಕತೆ ಇದೆ.

ಈ ರೀತಿ ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ಕಂಡು ಹಿಡಿಯುವ ಹಾಗೂ ಭಯರಹಿತವಾಗಿ ಆತ್ಮಸ್ಥೈರ್ಯ (Confidence) ತುಂಬವ ಸದುದ್ದೇಶದಿಂದ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಹಿಂದಿನ ವರ್ಷಗಳಂತೆ ಈ ವರ್ಷವೂ 'ಸಹಾಯವಾಣಿ' (Helpline) ಕೌನ್ಸಿಲಿಂಗ್ (Counseling ) ಕಾರ್ಯಕ್ರಮ ಉದ್ಘಾಟನೆಯಾಗಿದೆ. ಇದಕ್ಕಾಗಿ ಎರಡು ದೂರವಾಣಿ ಸಂಖ್ಯೆಗಳನ್ನು ಮೀಸಲಿಡಲಾಗಿದೆ. 080 – 23310075, 080–23310076 ಈ "ಸಹಾಯವಾಣಿ" ಯು 28–03–2016 ರವರೆಗೆ ಪ್ರತಿ ದಿನ ಬೆಳಿಗ್ಗೆ 9–00 ರಿಂದ ಸಂಜೆ 7–00 ಗಂಟೆಯವರೆಗೆ ಕಾರ್ಯನಿರ್ವಹಿಸುತ್ತಿದೆ.

ದಿನಾಂಕ: 30-03-2016 ರಿಂದ 3-04-2016 ರವರೆಗೆ ನಿಯಂತ್ರಣ ಕೊಠಡಿಯಾಗಿ ಬೆಳಿಗ್ಗೆ 9-00 ರಿಂದ ಮಧ್ಯಾಹ್ನ 2.30 ಗಂಟೆಯವರೆಗೆ ಮಾತ್ರ ಕಾರ್ಯನಿರ್ವಹಿಸುತ್ತದೆ.

ಪೋಷಕರು, ವಿದ್ಯಾರ್ಥಿಗಳು ಮೇಲೆ ತಿಳಿಸಿರುವ ದೂರವಾಣಿ ಸಂಖ್ಯೆಗೆ ಭಾನುವಾರ ಹಾಗೂ ಸರ್ಕಾರಿ ರಜಾ ದಿನಗಳನ್ನು ಹೊರತುಪಡಿಸಿ ಉಳಿದ ದಿನಗಳಂದು ಕರೆಮಾಡಿ ತಮ್ಮ ಸಮಸ್ಯೆಗಳಿಗೆ, ಸಂದೇಹಗಳಿಗೆ ಪರಿಹಾರ ಪಡೆದುಕೊಳ್ಳಬಹುದು. ಹೆಚ್ಚಿನ ರೀತಿಯಲ್ಲಿ ವಿದ್ಯಾರ್ಥಿಗಳು, ಪೋಷಕರು ಈ ಕಾರ್ಯಕ್ರಮದ ಸದುಪಯೋಗಪಡಿಸಿಕೊಂಡು, ಪ್ರಶ್ನೆಗಳನ್ನು ಕೇಳಬಹುದು.

ಬಾಬು:ಜಿಪಿಆರ್.

## ಬೆಂಗಳೂರು ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರ ರಚನೆ

**ಬೆಂಗಳೂರು, ಮಾರ್ಚ್ 26 (ಕರ್ನಾಟಕ ವಾರ್ತೆ) :**

ಬೆಂಗಳೂರು ಜಿಲ್ಲೆಯ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರವನ್ನು ಬೆಂಗಳೂರು ವಿಭಾಗದ ಪ್ರಾದೇಶಕ ಆಯುಕ್ತರ ಅಧ್ಯಕ್ಷತೆಯಲ್ಲಿ ರಚಿಸಲಾಗಿದೆ. ಸರ್ಕಾರದ ನಿವೃತ್ತ ಹೆಚ್ಚುವರಿ ಕಾರ್ಯದರ್ಶಿ ಎ. ಮುನಿಯಲ್ಲಪ್ಪ ಮತ್ತು ಕೃಷಿಕ ಎಂ. ಚನ್ನೇಗೌಡ ಪ್ರಾಧಿಕಾರದ ಸದಸ್ಯರಾಗಿದ್ದು ಬೆಂಗಳೂರು ಜಿಲ್ಲೆ ಪೊಲೀಸ್ ಸೂಪರಿಂಟೆಂಡೆಂಟ್ ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ. ಬೆಂಗಳೂರು ಜಿಲ್ಲೆಯ ಪೊಲೀಸ್ ಕರ್ತವ್ಯ ಲೋಪ ಹಾಗೂ ದುರ್ನಡತೆ ಕುರಿತು ದೂರುಗಳಿದ್ದಲ್ಲಿ ಅಧ್ಯಕ್ಷರು ಹಾಗೂ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರ, ಎರಡನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಕೆ.ಹೆಚ್. ರಸ್ತೆ, ಶಾಂತಿನಗರ, ಬೆಂಗಳೂರು-27, ದೂರವಾಣಿ ಸಂಖ್ಯೆ 080- 22109665 ಇಲ್ಲಿಗೆ ದೂರುಗಳನ್ನು ಸಲ್ಲಿಸಬಹುದಗಿದೆ.

ಬಾಬು/ಕೆಎಂ

## ವಿಶ್ವ ಆರೋಗ್ಯ ದಿನಾಚರಣೆ : ಏಪ್ರಿಲ್ 7

**ಬೆಂಗಳೂರು, ಮಾರ್ಚ್ 26 (ಕರ್ನಾಟಕ ವಾರ್ತೆ) :**

2016 ಏಪ್ರಿಲ್ 7 ರಂದು ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ವಿಶ್ವ ಆರೋಗ್ಯ ದಿನಾಚರಣೆಯನ್ನು ಆಚರಿಸಲಾಗುವುದೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತ ಪಿ.ಎಸ್. ವಸ್ತ್ರದ್ ಅವರು ತಿಳಿಸಿದರು.

ವಿಶ್ವ ಆರೋಗ್ಯ ದಿನಾಚರಣೆಯ ಅಂಗವಾಗಿ ಇತ್ತೀಚೆಗೆ ಬೆಂಗಳೂರಿನಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಅವರು **"ಮಧು ಮೇಹ ಏರಿಕೆಯನ್ನು ನಿಲ್ಲಿಸೋಣ ಹಾಗೂ ಸೋಲಿಸೋಣ"** ಎಂಬ ಘೋಷಣಾ ವಾಕ್ಯದೊಂದಿಗೆ ಈ ವರ್ಷದ ವಿಶ್ವ ಆರೋಗ್ಯ ದಿನಾಚರಣೆಯನ್ನು ಆಚರಿಸಲು ತೀರ್ಮಾನಿಸಲಾಗಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ಮಧುಮೇಹವು ವಯಸ್ಸಿನ ಅಂತರವಿಲ್ಲದೆ ಎಲ್ಲಾ ವಯಸ್ಸಿನವರಲ್ಲೂ ಕಾಣುವ ಕಾಯಿಲೆಯಾಗಿದೆ. ಈ ವರ್ಷದ ಆರೋಗ್ಯ ದಿನಾಚರಣೆಯಲ್ಲಿ ಮಧುಮೇಹವನ್ನು ತಡೆಯಲು ಜನಜಾಗೃತಿ ಮೂಡಿಸುವ ಬಗ್ಗೆ ಹೆಚ್ಚು ಒತ್ತು ನೀಡಲಾಗುವುದು. ಮಾಧ್ಯಮಗಳ ಮೂಲಕ ಅಗತ್ಯ ಪ್ರಚಾರ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಆಕಾಶವಾಣಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಯುವಜನ ಸೇವಾ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ವೈದ್ಯಕೀಯ ಶಿಕ್ಷಣ ಇಲಾಖೆಗಳ ಅಧಿಕಾರಿಗಳು ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

ಬಾಬು/ಕೆಎಂ

# ಆಯವ್ಯಯದ ಮೇಲಿನ ಚರ್ಚೆಗೆ ಮಾರ್ಚ್ 30 ರಂದು ಮುಖ್ಯಮಂತ್ರಿಗಳ ಉತ್ತರ

**ಬೆಂಗಳೂರು, ಮಾರ್ಚ್ 26 (ಕರ್ನಾಟಕ ವಾರ್ತೆ)**

**ಮಾರ್ಚ್ 30 ರಂದು ಆಯವ್ಯಯದ ಮೇಲಿನ ಚರ್ಚೆಗೆ ಮುಖ್ಯಮಂತ್ರಿಗಳ ಉತ್ತರ ನೀಡುವರು**

**ದಿನಾಂಕ 21-03-2016 ರಂದು ನಡೆದ ವಿಧಾನಸಭೆ ಕಾರ್ಯಕಲಾಪಗಳ ಸಲಹಾ ಸಮಿತಿಯ ಸಭೆಯಲ್ಲಿ ಈ ಕೆಳಕಂಡಂತೆ ತೀರ್ಮಾನಿಸಲಾಗಿದೆ.**

*** ದಿನಾಂಕ: 29-03-2016 ರವರೆಗೆ ಆಯವ್ಯಯದ ಮೇಲೆ ಚರ್ಚೆ ನಡೆಯಲಿದೆ.**

*** ಆಯವ್ಯಯದ ಮೇಲೆ ನಡೆದ ಸಾಮಾನ್ಯ ಚರ್ಚೆಗೆ ಮುಖ್ಯಮಂತ್ರಿಯವರು ದಿನಾಂಕ: 30-03-2016 ರಂದು ಬೆಳಿಗ್ಗೆ ಉತ್ತರ ನೀಡಲಿದ್ದಾರೆ. ತದನಂತರ ಅದೇ ದಿನದಂದು ಧನ ವಿನಿಯೋಗ ವಿಧೇಯಕ ಹಾಗೂ ಸಂಬಂಧಿತ ವಿಧೇಯಕಗಳನ್ನು ಅಂಗೀಕಾರ ಪಡೆಯಲು ಮಂಡಿಸಲಾಗುವುದು.**

* ಪ್ರಸ್ತುತ ಅಧಿವೇಶನದಲ್ಲಿ ಪೂರಕ ಅಂದಾಜುಗಳ ಮಂಡನೆ ಹಾಗೂ ಚರ್ಚೆ ನಡೆದು ಅಂಗೀಕಾರವಾಗಲಿದೆ.

* ಅಧಿವೇಶನದ ಅವಧಿಯಲ್ಲಿ ಇತರೆ ವಿಧೇಯಕಗಳು ಬಂದಲ್ಲಿ ಅವುಗಳ ಮಂಡನೆ, ಪರ್ಯಾಲೋಚನೆಗೆ ತೆಗೆದುಕೊಳ್ಳಲಾಗುವುದು.

ಬಾಬು:ಜಿಪಿಆರ್.